ರಾಜ್ಯದಲ್ಲಿ ಹೊಸ ಪಶು ಚಿಕಿತ್ಸಾ ಆಸ್ಪತ್ರೆಗಳನ್ನು ತೆರೆಯುವ ಬಗ್ಗೆ

೩೯೬. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶುಸಂಗೋಪನ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಹೊಸ ಪಶು ಚಿಕಿತ್ಸಾಲಯಗಳನ್ನು ಸರ್ಕಾರದವರು ತೆರೆಯಲು ನಿರ್ಧರಿಸಿದ್ದಾರೆಯೆ ?

ಆ) ಹಾಗಿದ್ದಲ್ಲಿ, ಯಾವಾಗ ಮತ್ತು ಎಷ್ಟು ಪಶು ಚಿಕಿತ್ಸಾಲಯಗಳನ್ನು ತೆರೆಯಲಾಗುವುದು ?

ಶ್ರೀ ಬಿ. ಬಸವಲಿಂಗಪ್ಪ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಪಶು ಸಂಗೋಪನಾ ಸಚಿವರು).—

ಅ) ಹೌದು

ಆ) ೧೯೮೯-೯೦ನೇ ಸಾಲಿನಲ್ಲಿ ೧೫೦ ಹೊಸ ಗ್ರಾಮೀಣ ಪಶು ಚಿಕಿತ್ಸಾಲಯಗಳನ್ನು ತೆರೆಯಲಾಗಿದೆ, ಹಾಗೂ ೫೦ ಗ್ರಾಮೀಣ ಪಶು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೆ ಏರಿಸಲಾಗಿದೆ.

ರಾಜ್ಯದಲ್ಲಿರುವ ಕ್ಯಾನ್ಸರ್ ರೋಗಿಗಳ ಸಂಖ್ಯೆಯ ಬಗ್ಗೆ

೩೯೭. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಕ್ಯಾನ್ಸರ್ ರೋಗಿಗಳು ಎಷ್ಟಿದ್ದಾರೆ ?

ಆ) ರಾಜ್ಯದಲ್ಲಿ ಕ್ಯಾನ್ಸರ್ ಖಾಯಿಲೆ ವ್ಯಾಪಕವಾಗಿ ಬೆಳೆಯುತ್ತಿರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಇ) ಇದನ್ನು ತಡೆಗಟ್ಟಲು ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು).—

ಅ) ೧,೪೮,೨೩೬ ರೋಗಿಗಳನ್ನು ಗುರುತಿಸಲಾಗಿದೆ.

ಆ) ಹೌದು

ಇ) ಇದನ್ನು ತಡೆಗಟ್ಟಲು ಹಲವಾರು ಕಾರ್ಯಕ್ರಮಗಳನ್ನು ಸರ್ಕಾರವು ತೆಗೆದುಕೊಂಡಿದೆ. ಅದರಲ್ಲಿ ಪ್ರಮುಖವಾದುದು ಪೆರಿಫರಲ್ ಕ್ಯಾನ್ಸರ್ ಕೇಂದ್ರಗಳನ್ನು ವಿಭಾಗ ಅಥವಾ ಜಿಲ್ಲಾ ಕೇಂದ್ರಗಳಲ್ಲಿ ಸ್ಥಾಪಿಸುವುದು. ರಾಷ್ಟ್ರೀಯ ಕ್ಯಾನ್ಸರ್ ಮಂಡಳಿಯಂತೆ ರಾಜ್ಯ ಕ್ಯಾನ್ಸರ್ ಸಲಹಾ ಮಂಡಳಿ ಸ್ಥಾಪಿಸಲಾಗಿದೆ. ಹಾಗೂ ಕ್ಯಾನ್ಸರ್ ಕಂಟ್ರೋಲ್ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಇದರಲ್ಲಿ ತಂಬಾಕು ಸೇವನೆಯ ವಿರುದ್ಧ ಶಿಕ್ಷಣವಳಿಕೆ ನೀಡಲಾಗುತ್ತಿದೆ. ಸಂಚಾರಿ ಆರ್ಬುದ ನಿವಾರಣಾ ಕೇಂದ್ರ ಸಹ ಕೆಲಸ ಮಾಡುತ್ತಿದೆ.

ಬೆಂಗಳೂರಿನಲ್ಲಿ ಮಕ್ಕಳ ಖಾಯಿಲೆ ನಿವಾರಣೆಗಾಗಿ ವಿಶೇಷವಾದ ಆಸ್ಪತ್ರೆ ಕಟ್ಟುವ ಬಗ್ಗೆ

೩೯೪. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರಿನಲ್ಲಿ ಮಕ್ಕಳ ಖಾಯಿಲೆ ನಿವಾರಣೆಗಾಗಿ ವಿಶೇಷವಾದ ಆಸ್ಪತ್ರೆಯನ್ನು ಕಟ್ಟುವ ಯೋಜನೆ ಸರ್ಕಾರದವರ ಮುಂದೆ ಇದೆಯೇ ?

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು ?

ಶ್ರೀಮತಿ ಮನೋರಮ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಸಹಕಾರ ಮಂತ್ರಿಗಳು).—

ಅ) ಹೌದು.